# All India Radio: Bangalore
## National Bulletin In Kannada
**01.10.2026 07.35 a.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**01.10.2026 07.35 a.m.**

**<><><><>**

ಮುಖ್ಯಾಂಶಗಳು

1. ದೇಶಾದ್ಯಂತ ರೈತರ ಆದಾಯ ವೃದ್ಧಿಗೆ ಶ್ರಮಿಸುವ ಜೊತೆಗೆ ಅವರ ಹಿತಾಸಕ್ತಿ ರಕ್ಷಿಸಲು ಸರ್ಕಾರದಿಂದ ಎಲ್ಲ ಪ್ರಯತ್ನ-ಪ್ರಧಾನಿ ನರೇಂದ್ರ ಮೋದಿ
2. 'ರಾಷ್ಟ್ರೀಯ ಕರಾವಳಿ ಅಭಿಯಾನ ೨.೦' ಅನುಷ್ಠಾನಕ್ಕಾಗಿ ಮಾರ್ಗಸೂಚಿ ಬಿಡುಗಡೆ ಮಾಡಿದ ಕೇಂದ್ರ ಸಚಿವ ಭೂಪೇಂದರ್ ಯಾದವ್
3. ಕೇಂದ್ರ ಲೋಕಸೇವಾ ಆಯೋಗದ ಶತಮಾನೋತ್ಸವ ಸಮಾರಂಭದಲ್ಲಿಂದು ಪ್ರಧಾನಿ ಭಾಗಿ
4. ದೆಹಲಿಯಲ್ಲಿಂದು ವಸ್ತ್ರೋದ್ಯಮ ಸಮಾವೇಶ: ವಲಯದ ಉದಯೋನ್ಮುಖ ತಂತ್ರಜ್ಞಾನಗಳ ಕುರಿತು ಚರ್ಚೆ
5. ಏಷ್ಯನ್ ಕ್ರೀಡಾಕೂಟ : ಪದಕ ಪಟ್ಟಿಯಲ್ಲಿ ೪ನೇ ಸ್ಥಾನಕ್ಕೇರಿದ ಭಾರತ : ಇಂದು ಪುರುಷರ ಹಾಕಿ ವಿಭಾಗದಲ್ಲಿ ಪಾಕಿಸ್ತಾನದೆದುರು ಸೆಣಸು

<><><><>

ದೇಶಾದ್ಯಂತ ರೈತರ ಆದಾಯ ವೃದ್ಧಿಸುವ ನಿಟ್ಟಿನಲ್ಲಿ ಶ್ರಮಿಸುವ ಜತೆ ಜತೆಗೆ ಅವರ ಹಿತಾಸಕ್ತಿಗಳನ್ನು ರಕ್ಷಿಸಲು ಸರ್ಕಾರವು ಎಲ್ಲ ರೀತಿಯ ಪ್ರಯತ್ನಗಳನ್ನೂ ಮಾಡುತ್ತಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ಅವರು ತಮ್ಮ ಸಾಮಾಜಿಕ ಜಾಲತಾಣದ ಪೋಸ್ಟ್‌ನಲ್ಲಿ, ೨೦೨೬-೨೭ರ ಮಾರುಕಟ್ಟೆ ಅವಧಿಗೆ ಹಿಂಗಾರು ಬೆಳೆಗಳ ಕನಿಷ್ಠ ಬೆಂಬಲ ಬೆಲೆ ಹೆಚ್ಚಿಸಲು ಸರ್ಕಾರ ಅನುಮೋದನೆ ನೀಡಿದೆ. ಈ ನಿರ್ಧಾರವು ದೇಶಾದ್ಯಂತ ಲಕ್ಷಾಂತರ ರೈತರಿಗೆ ತಮ್ಮ ಕೃಷಿ ಉತ್ಪನ್ನಗಳಿಗೆ ಉತ್ತಮ ಹಾಗೂ ಲಾಭದಾಯಕ ಬೆಲೆಯನ್ನು ಖಾತ್ರಿಪಡಿಸುತ್ತದೆ ಎಂದು ಹೇಳಿದರು. ಹಸಿರು ಇಂಧನ ಕಾರಿಡಾರ್ ಹಂತ-೩ ಕುರಿತಾದ ಕೇಂದ್ರ ಸಚಿವ ಸಂಪುಟದ ನಿರ್ಧಾರವು ೧೩೫ ಗಿಗಾವ್ಯಾಟ್ ನವೀಕರಿಸಬಹುದಾದ ಇಂಧನದ ಪ್ರಸರಣಕ್ಕೆ ಅನುವು ಮಾಡಿಕೊಡುತ್ತದೆ, ೫೦ ಗಿಗಾವ್ಯಾಟ್ ವಿದ್ಯುತ್ ಬ್ಯಾಟರಿ ಸಂಗ್ರಹಣಾ ಸಾಮರ್ಥ್ಯಕ್ಕೆ ಬೆಂಬಲ ನೀಡುತ್ತದೆ ಮತ್ತು ವಿವಿಧ ರಾಜ್ಯಗಳು ಹಾಗೂ ಕೇಂದ್ರಾಡಳಿತ ಪ್ರದೇಶಗಳಲ್ಲಿ ವಿದ್ಯುತ್ ಜಾಲಗಳನ್ನು ಬಲಪಡಿಸುತ್ತದೆ ಎಂದು ತಿಳಿಸಿದ್ದಾರೆ.

<><><><>

ಕೇಂದ್ರ ಪರಿಸರ, ಅರಣ್ಯ ಮತ್ತು ಹವಾಮಾನ ವೈಪರಿತ್ಯ ಸಚಿವ ಭೂಪೇಂದರ್ ಯಾದವ್ ನವದೆಹಲಿಯಲ್ಲಿ ನಿನ್ನೆ 'ರಾಷ್ಟ್ರೀಯ ಕರಾವಳಿ ಅಭಿಯಾನ ೨.೦' ಅನುಷ್ಠಾನಕ್ಕಾಗಿ ಮಾರ್ಗಸೂಚಿಗಳನ್ನು ಬಿಡುಗಡೆ ಮಾಡಿದರು. ಕೇಂದ್ರ ಸರ್ಕಾರದ ೬೯೬ ಕೋಟಿ ರೂಪಾಯಿಗಳ ವೆಚ್ಚದ ಈ ಯೋಜನೆಯನ್ನು, ದೇಶದ ಒಂಬತ್ತು ಕರಾವಳಿ ರಾಜ್ಯಗಳು ಮತ್ತು ನಾಲ್ಕು ಕೇಂದ್ರಾಡಳಿತ ಪ್ರದೇಶಗಳಲ್ಲಿ ೨೦೩೦-೩೧ರವರೆಗೆ ಅನುಷ್ಠಾನಗೊಳಿಸಲಾಗುವುದು. ಭಾರತದ ಕರಾವಳಿ ಪ್ರದೇಶಗಳ ಸ್ಥಿತಿಸ್ಥಾಪಕತ್ವ ಮತ್ತು ಸುಸ್ಥಿರತೆ ಬಲಪಡಿಸುವುದು ಹಾಗೂ 'ನೀಲಿ ಆರ್ಥಿಕತೆ'ಯ ಸಾಮರ್ಥ್ಯ ಬಳಸಿಕೊಳ್ಳುವುದು ಈ ಯೋಜನೆಯ ಗುರಿಯಾಗಿದೆ ಎಂದು ಪರಿಸರ, ಅರಣ್ಯ ಸಚಿವಾಲಯ ತಿಳಿಸಿದೆ.

ಮಾರ್ಗಸೂಚಿ ಬಿಡುಗಡೆ ಮಾಡಿ ಮಾತನಾಡಿದ ಸಚಿವ ಭೂಪೇಂದ್ರ ಯಾದವ್, ದೌರ್ಬಲ್ಯಗಳ ಮೌಲ್ಯಮಾಪನ, ಪರಿಸರ ವ್ಯವಸ್ಥೆಯ ಪುನಃಸ್ಥಾಪನೆ, ಮಾಲಿನ್ಯ ನಿರ್ವಹಣೆ, ಜೀವವೈವಿಧ್ಯ ಸಂರಕ್ಷಣೆ, ಸುಸ್ಥಿರ ಪ್ರವಾಸೋದ್ಯಮ, ಪ್ರಾದೇಶಿಕ ಯೋಜನೆ, ಸಂಶೋಧನೆ ಮತ್ತು ಸಾಮರ್ಥ್ಯ ವರ್ಧನೆಯ ಮೂಲಕ ಈ ಅಭಿಯಾನವು ಕರಾವಳಿ ಪ್ರದೇಶಗಳ ಸ್ಥಿತಿಸ್ಥಾಪಕತ್ವವನ್ನು ಬಲಪಡಿಸಲಿದೆ ಎಂದು ಹೇಳಿದರು.

<><><><>

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರಿಂದು ನವದೆಹಲಿಯ ಭಾರತ್ ಮಂಟಪದಲ್ಲಿ ನಡೆಯಲಿರುವ ಕೇಂದ್ರ ಲೋಕಸೇವಾ ಆಯೋಗ-ಯುಪಿಎಸ್‌ಸಿ ಶತಮಾನೋತ್ಸವ ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ. ಈ ಸಂದರ್ಭದಲ್ಲಿ ಅವರು ಸಭೆಯನ್ನುದ್ದೇಶಿಸಿ ಮಾತನಾಡಲಿದ್ದಾರೆ. ೧೯೨೬ರಲ್ಲಿ ಯುಪಿಎಸ್‌ಸಿ ಸ್ಥಾಪನೆಯಾಗಿದ್ದು, ಅಕ್ಟೋಬರ್ ೧ರಂದು ೧೦೦ ವರ್ಷ ಪೂರೈಸಲಿರುವ ಅಂಗವಾಗಿ ಕಳೆದ ವರ್ಷವಿಡೀ ನಡೆದ ಅದ್ದೂರಿ ಆಚರಣೆಗಳ ಸಮಾರೋಪದ ಭಾಗವಾಗಿ ಈ ಕಾರ್ಯಕ್ರಮ ಆಯೋಜಿಸಲಾಗಿದೆ. ಇದೇ ವೇಳೆ ಶತಮಾನೋತ್ಸವ ಸ್ಮರಣಾರ್ಥ ನಾಣ್ಯ ಮತ್ತು ಅಂಚೆ ಚೀಟಿ ಮತ್ತು "ಭಾರತದಲ್ಲಿ ಯುಪಿಎಸ್‌ಸಿ ಮತ್ತು ಲೋಕ ಸೇವಾ ಆಯೋಗಗಳ ನೀತಿಗಳನ್ನು ರೂಪಿಸಿರುವ ೧೦೦ ಹೆಗ್ಗುರುತು ತೀರ್ಪುಗಳು' ಎಂಬ ಕೃತಿಯನ್ನು ಪ್ರಧಾನಿ ಬಿಡುಗಡೆ ಮಾಡಲಿದ್ದಾರೆ. ರಾಜ್ಯಗಳ ಲೋಕಸೇವಾ ಆಯೋಗಗಳ ಅಧ್ಯಕ್ಷರು ಮತ್ತು ಸದಸ್ಯರು, ಭಾರತ ಸರ್ಕಾರದ ಹಿರಿಯ ಅಧಿಕಾರಿಗಳು, ಶಿಕ್ಷಣ ತಜ್ಞರು, ಯುಪಿಎಸ್‌ಸಿ ಅಧಿಕಾರಿಗಳು ಮತ್ತು ಇತರರು ಸೇರಿದಂತೆ ದೇಶಾದ್ಯಂತದ ಹಲವು ಪಾಲುದಾರರು ಈ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ಎರಡು ದಿನಗಳ ಈ ಕಾರ್ಯಕ್ರಮ ಕುರಿತು ಹೆಚ್ಚಿನ ಮಾಹಿತಿ ಇದೀಗ.

<><><><>

ರಕ್ಷಣಾ ಸಚಿವ ರಾಜನಾಥ್ ಸಿಂಗ್ ನವದೆಹಲಿಯಲ್ಲಿಂದು ನಡೆಯಲಿರುವ ರಕ್ಷಣಾ ಲೆಕ್ಕಪತ್ರ ಇಲಾಖೆಯ ೨೬೯ನೇ ವಾರ್ಷಿಕೋತ್ಸವದಲ್ಲಿ ಭಾಗವಹಿಸಲಿದ್ದಾರೆ. ಈ ವೇಳೆ ಅವರು ಇಲಾಖೆಯ ವಿವಿಧ ಮಾಹಿತಿ ತಂತ್ರಜ್ಞಾನ ಉಪಕ್ರಮಗಳಿಗೆ ಚಾಲನೆ ನೀಡಲಿದ್ದಾರೆ. ಅವುಗಳಲ್ಲಿ ಭಾರತೀಯ ಸೇನೆಯ ಹಣಕಾಸು ಮಾಹಿತಿ ವ್ಯವಸ್ಥೆಯನ್ನು ಇಲಾಖೆಯ 'ಸಾಕ್ಷಮ್' ವೇದಿಕೆಯೊಂದಿಗೆ ಸಂಯೋಜಿಸುವುದು, ರಕ್ಷಣಾ ಸಚಿವಾಲಯಕ್ಕಾಗಿ ಪರಿಷ್ಕೃತ 'ರಾಷ್ಟ್ರೀಯ ಸಂಕಲನ ವ್ಯವಸ್ಥೆ' ಹಾಗೂ ರಕ್ಷಣಾ ಸಚಿವಾಲಯದಲ್ಲಿ 'ಖಜಾನೆ-ಏಕ ಖಾತೆ ಪಾವತಿ' ವ್ಯವಸ್ಥೆಯನ್ನು ಜಾರಿಗೆ ತರುವ ನಿಟ್ಟಿನಲ್ಲಿ 'ಪಾವತಿ

ಮಾರ್ಗನಿರ್ದೇಶನ ಮತ್ತು ಸಮಗ್ರ ವ್ಯವಸ್ಥೆ ನಿರ್ವಹಣಾ ವೇದಿಕೆ ಅನಾವರಣವೂ ಸೇರಿವೆ. ಜೊತೆಗೆ, 'ರಕ್ಷಣಾ ವೆಚ್ಚ ೨೦೨೬ರ ಕುರಿತ ಸಮಗ್ರ ಅಂಕಿಅಂಶಗಳ ಕೈಪಿಡಿ' ಸೇರಿದಂತೆ ಹಲವು ಪ್ರಕಟಣೆಗಳನ್ನು ಅವರು ಬಿಡುಗಡೆ ಮಾಡಲಿದ್ದಾರೆ.

<><><><>

ವಸ್ತ್ರೋದ್ಯಮ ಕ್ಷೇತ್ರದಲ್ಲಿನ ಉದಯೋನ್ಮುಖ ತಂತ್ರಜ್ಞಾನಗಳ ಕುರಿತು ಚರ್ಚಿಸಲು ನವದೆಹಲಿಯಲ್ಲಿಂದು ವಸ್ತ್ರೋದ್ಯಮ ಸಮಾವೇಶ ನಡೆಯಲಿದೆ. ಪತ್ರಿಕಾಗೋಷ್ಠಿಯಲ್ಲಿ ವಿವರ ನೀಡಿದ ಲಘು ಉದ್ಯೋಗ ಭಾರತಿಯ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಓಂ ಪ್ರಕಾಶ್ ಗುಪ್ತಾ, ಈ ಸಮಾವೇಶವು ದೇಶಾದ್ಯಂತದ ವಸ್ತ್ರೋದ್ಯಮಕ್ಕೆ ಸಂಬಂಧಿಸಿದ ೪೦೦ ಅತಿಸಣ್ಣ ಮತ್ತು ಸಣ್ಣ ಕೈಗಾರಿಕೆಗಳನ್ನು ಒಂದೆಡೆ ಸೇರಿಸಲಿದೆ. ಕೇಂದ್ರ ವಸ್ತ್ರೋದ್ಯಮ ಸಚಿವ ಗಿರಿರಾಜ್ ಸಿಂಗ್ ಸಮಾವೇಶವನ್ನು ಉದ್ಘಾಟಿಸಲಿದ್ದಾರೆ ಎಂದರು. ವಿವಿಧ ದೇಶಗಳೊಂದಿಗಿನ ಮುಕ್ತ ವ್ಯಾಪಾರ ಒಪ್ಪಂದಗಳು ಹೊಸ ಮಾರುಕಟ್ಟೆಗಳನ್ನು ತೆರೆಯುವ ನಿರೀಕ್ಷೆಯಿದೆ ಮತ್ತು ಇದು ಈ ಕಾರ್ಯಕ್ರಮದ ಪ್ರಮುಖ ಚರ್ಚಾ ವಿಷಯವಾಗಲಿದೆ. ಸಮಾವೇಶದಲ್ಲಿ ಭಾಗವಹಿಸುವವರಿಗೆ ವಸ್ತ್ರೋದ್ಯಮ ಕ್ಷೇತ್ರಕ್ಕೆ ಸಂಬಂಧಿಸಿದ ಸರ್ಕಾರದ ದೂರದೃಷ್ಟಿ, ನೀತಿಗಳು ಮತ್ತು ಯೋಜನೆಗಳ ಕುರಿತು ಮಾಹಿತಿ ನೀಡಲಾಗುವುದು. ವಸ್ತ್ರೋದ್ಯಮ ಕ್ಷೇತ್ರವು ದೇಶಾದ್ಯಂತ ಸುಮಾರು ೪.೫ ಕೋಟಿ ಜನರಿಗೆ ಉದ್ಯೋಗವನ್ನು ಒದಗಿಸುತ್ತಿದೆ ಎಂದು ಅವರು ಹೇಳಿದರು.

<><><><>

ಪ್ರಧಾನಿ ನರೇಂದ್ರ ಮೋದಿ ಅವರು ಸಾರ್ವಜನಿಕ ಸೇವೆಯಲ್ಲಿ ೨೫ ವರ್ಷ ಪೂರ್ಣಗೊಳಿಸಿದ ಹಿನ್ನೆಲೆಯಲ್ಲಿ, ದೇಶಾದ್ಯಂತ, 'ಸೇವಾ ಸಂಕಲ್ಪ ಅಭಿಯಾನ' ನಡೆಯುತ್ತಿದೆ. 'ಜನ ಸೇವೆಯೇ ದೇಶ ಸೇವೆ' ಎಂಬ ಮಂತ್ರದಡಿ ಸೇವೆ ಮತ್ತು ಸುಶಾಸನದ ದೂರದೃಷ್ಟಿಯೊಂದಿಗೆ ಸರ್ಕಾರ, ೨೦೪೭ರ ವೇಳೆಗೆ 'ವಿಕಸಿತ ಭಾರತ' ಗುರಿ ಸಾಧನೆಯತ್ತ ಸಾಗುತ್ತಿದೆ.  ಅದರ ಭಾಗವಾಗಿ, ಹಲವು ವಲಯಗಳಲ್ಲಿ ಕೈಗೊಂಡ ಮಹತ್ವದ ಸುಧಾರಣೆಗಳ ಕುರಿತ ಸರಣಿಯನ್ನು ಆಕಾಶವಾಣಿ ಪ್ರಸಾರ ಮಾಡುತ್ತಿದೆ. ಇಂದಿನ ಆವೃತ್ತಿಯಲ್ಲಿ ವೋಕಲ್ ಫಾರ್ ಲೋಕಲ್ ಅಂದರೆ ಸ್ಥಳೀಯ ಉತ್ಪನ್ನಗಳಿಗೆ ಧ್ವನಿಗೂಡಿಸಿ ಎಂಬುದರ ಕುರಿತ ಒಂದು ವರದಿ ಇಲ್ಲಿದೆ. ದೇಶದಲ್ಲಿ ಗ್ರಾಹಕರ ಆಯ್ಕೆಗಳು ಬದಲಾಗುತ್ತಿದೆ. ಮೊದಲು ಆಮದು ಮಾಡಿಕೊಂಡ ಮತ್ತು ಬಹುದೊಡ್ಡ ಬ್ರ್ಯಾಂಡ್‌ಗಳ ವಸ್ತುಗಳನ್ನು ಬಯಸುತ್ತಿದ್ದ ಜನರು ಇದೀಗ ದೇಶೀಯ ಉತ್ಪನ್ನಗಳತ್ತ ಒಲವು ತೋರುತ್ತಿದ್ದಾರೆ. ಇತ್ತೀಚಿನ ದಿನಗಳಲ್ಲಿ ದೇಶೀಯ ಉತ್ಪನ್ನಗಳಿಗೆ ಮಾರುಕಟ್ಟೆ ಬೇಡಿಕೆ ಹೆಚ್ಚಾಗಿದ್ದರಿಂದ ನಮ್ಮ ಅತಿಸಣ್ಣ, ಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳು ಹಾಗೂ ಕರಕುಶಲ ಕರ್ಮಿಗಳಿಗೆ ಹೆಚ್ಚಿನ ಕೆಲಸ ದೊರಕುತ್ತಿದೆ. ಸ್ಥಳೀಯ ಉತ್ಪನ್ನಗಳಿಗೆ ಬೆಂಬಲ ನೀಡಬೇಕೆಂಬ ಪ್ರಧಾನಿ ನರೇಂದ್ರ ಮೋದಿಯವರ ಕರೆಯ ಮೇರೆಗೆ ದೇಶದ ಬಹುಪಾಲು ಜನರು ವಿದೇಶಿ ವಸ್ತುಗಳಿಗಿಂತ ಹೆಚ್ಚಾಗಿ ದೇಶೀಯ ಉತ್ಪನ್ನಗಳ ಖರೀದಿ ಹಾಗೂ ಬಳಕೆಗೆ ಮುಂದಾಗಿದ್ದಾರೆ. ಹಾಗಾಗಿ ದೇಶೀಯ ಉತ್ಪನ್ನಗಳಿಗೆ ಬೇಡಿಕೆ ಹೆಚ್ಚಾಗಿ ವ್ಯಾಪಾರ ವಹಿವಾಟು ವೃದ್ಧಿಯಾಗಿರುವುದಲ್ಲದೇ ಸ್ಥಳೀಯ ಕುಶಲ ಕರ್ಮಿಗಳಿಗೂ ಉತ್ತಮ ಆದಾಯ ದೊರಕುತ್ತಿದ್ದು, ಅವರ ಜೀವನ ಸುಧಾರಿಸುತ್ತಿದೆ.

<><><><>

ಜಪಾನ್‌ನಲ್ಲಿ ನಡೆಯುತ್ತಿರುವ ಏಷ್ಯನ್ ಕ್ರೀಡಾಕೂಟದಲ್ಲಿ ಭಾರತ ನಿನ್ನೆ ೪ ಚಿನ್ನದ ಪದಕಗಳ ಮೂಲಕ ಶ್ರೇಷ್ಠ ಸಾದನೆ ಮಾಡಿದೆ. ಇದರಿಂದಾಗಿ ಭಾರತ ಒಟ್ಟು ೧೦ ಚಿನ್ನ, ೨೧ ಬೆಳ್ಳಿ ಹಾಗೂ ೨೯ ಕಂಚಿನ ಪದಕ ಸೇರಿ ೬೦ ಪದಕಗಳನ್ನು ತನ್ನದಾಗಿಸಿಕೊಂಡಿದ್ದು, ಪದಕ ಪಟ್ಟಿಯಲ್ಲಿ ೧೦ನೇ ಸ್ಥಾನದಿಂದ ೪ನೇ ಸ್ಥಾನಕ್ಕೆ ಜಿಗಿದಿದೆ. ಭಾರತ ಇಂದು ಹಲವು ಪ್ರಮುಖ ಸ್ಪರ್ಧೆಗಳಲ್ಲಿ ಮತ್ತಷ್ಟು ಪದಕಗಳನ್ನು ತನ್ನದಾಗಿಸಿಕೊಳ್ಳುವ ಭರವಸೆಯಿದೆ. ಪುರುಷರ ಹಾಕಿ ವಿಭಾಗದ ಸೆಮಿಫೈನಲ್‌ನಲ್ಲಿ ಭಾರತ ಸಾಂಪ್ರದಾಯಿಕ ಎದುರಾಳಿ ಪಾಕಿಸ್ತಾನವನ್ನು ಎದುರಿಸಲಿದೆ. ಅಥ್ಲೆಟಿಕ್ಸ್, ಶೂಟಿಂಗ್, ಜೋಡೋ, ವಾಲಿಬಾಲ್ ಸೇರಿದಂತೆ ಹಲವು ಸ್ಪರ್ಧೆಗಳಲ್ಲಿ ಭಾರತೀಯ ಪಟುಗಳು ಸೆಣಸಲಿದ್ದಾರೆ.

<><><><>

ನಿನ್ನೆ ರಾತ್ರಿ ಗುವಾಹಾಟಿಯ ಬರ್ಸಾಪಾರಾ ಕ್ರಿಕೆಟ್ ಕ್ರೀಡಾಂಗಣದಲ್ಲಿ ನಡೆದ ಪುರುಷರ ಮೂರು ಪಂದ್ಯಗಳ ಸರಣಿಯ ಎರಡನೇ ಏಕದಿನ ಪಂದ್ಯದಲ್ಲಿ ಭಾರತವು ವೆಸ್ಟ್ ಇಂಡೀಸ್ ವಿರುದ್ಧ ಎಂಟು ವಿಕೆಟ್‌ಗಳ ಭರ್ಜರಿ ಗೆಲುವು ದಾಖಲಿಸಿದೆ. ಈ ಮೂಲಕ ಸರಣಿಯಲ್ಲಿ ೨-೦ ಅಂತರದ ಅಜೇಯ ಮುನ್ನಡೆಯನ್ನು ಕಾಯ್ದುಕೊಂಡಿದೆ. ಮೊದಲು ಬ್ಯಾಟಿಂಗ್ ಮಾಡಿದ ವೆಸ್ಟ್ ಇಂಡೀಸ್ ತಂಡವು ನಿಗದಿತ ೫೦ ಓವರ್‌ಗಳಲ್ಲಿ ೭ ವಿಕೆಟ್ ನಷ್ಟಕ್ಕೆ ೪೦೫ ರನ್‌ಗಳ ಗುರಿಯೊಡ್ಡಿತು. ನಂತರ ಭಾರತ ೪೩.೩ ಓವರ್‌ಗಳಲ್ಲಿ ಕೇವಲ ೨ ವಿಕೆಟ್ ಕಳೆದುಕೊಂಡು ಗೆಲುವು ಸಾಧಿಸಿತು. ನಾಯಕ ಶುಭ್‌ಮನ್ ಗಿಲ್ ೧೩೩ ಎಸೆತಗಳಲ್ಲಿ ಅಜೇಯ ೨೨೩ ರನ್ ಸಿಡಿಸಿದರು. ರೋಹಿತ್ ಶರ್ಮ ೭೫ ಎಸೆತಗಳಲ್ಲಿ ೧೦೧ ರನ್ ಗಳಿಸಿದರು.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>